ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 ದಿನಾಂಕ: 07–11–2019

# ಪತ್ರಿಕಾ ಆಮಂತ್ರಣ

1. ಅಗ್ನಿಶಾಮಕ ಅಧಿಕಾರಿ ಮತ್ತು ಸಿಬ್ಬಂದಿಗೆ ರಾಷ್ಟ್ರಪತಿ ಸೇವಾ ಪದಕ ಪ್ರದಾನ ಸಮಾರಂಭ – 2019

ಪದಕ ಪ್ರದಾನ:

ಶ್ರೀ ವಜುಭಾಯಿ ರುಢಾಭಾಯಿ ವಾಲ,
ಗೌರವಾನ್ವಿತ ರಾಜ್ಯಪಾಲರು, ಕರ್ನಾಟಕ

ಅಧ್ಯಕ್ಷತೆ:

ಶ್ರೀ ಬಸವರಾಜ ಬೊಮ್ಮಾಯಿ,
ಗೃಹ ಹಾಗೂ ಸಹಕಾರ ಸಚಿವರು

ದಿನಾಂಕ: 08–11–2019 ಶುಕ್ರವಾರ ಸಮಯ: ಬೆಳಿಗ್ಗೆ 11.00 ಗಂಟೆಗೆ

ಸ್ಥಳ : ಗಾಜಿನ ಮನೆ, ರಾಜಭವನ, ಬೆಂಗಳೂರು.

2. **President's Medal Investiture Ceremony for Officers and Personnel of the Fire Services - 2019:**

**Present the Medals:**

**Shri Vajubhai Rudabhai Vala,**
**Hon'ble Governor of Karnataka.**

**Preside Over the Function:**

**Shri Basavaraj Bommai,**
**Hon'ble Minister for Home and Co-operation**

**Date: 08-11-2019, Friday Time: 11-00 A.M.**

**Venue: Raj Bhavan, Glass House, Bengaluru.**

3. **ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳ ಲೋಕಾರ್ಪಣಾ ಸಮಾರಂಭ :**
   **<u>ಉದ್ಘಾಟನೆ ಮತ್ತು ಅಧ್ಯಕ್ಷತೆ</u> :**

   ಶ್ರೀ ಬಿ. ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

   <u>ಘನ ಉಪಸ್ಥಿತಿ :</u>

   ಶ್ರೀ ಗೋವಿಂದ ಎಂ ಕಾರಜೋಳ,
   ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು

   ಡಾ : ಸಿ. ಎನ್. ಅಶ್ವಥ್‌ನಾರಾಯಣ,
   ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

   ಶ್ರೀ ಲಕ್ಷ್ಮಣ ಸಂಗಪ್ಪ ಸವದಿ,
   ಉಪ ಮುಖ್ಯಮಂತ್ರಿಗಳು, ಸಾರಿಗೆ ಇಲಾಖೆ ಸಚಿವರು

   ದಿನಾಂಕ: 08–11–2019 ಶುಕ್ರವಾರ ಬೆಳಿಗ್ಗೆ 11–00 ಗಂಟೆಗೆ
   ಸ್ಥಳ: ದೊಡ್ಡಬೆಲೆ ರಸ್ತೆ, ಕೆಂಗೇರಿ, ಬೆಂಗಳೂರು

4. **Technical Education Quality Improvement Program : Summit Connect Jointly organized by SPIU – Uttar Pradesh & SPIU – Karnataka.**

   **<u>Inauguration;</u>**

   **Dr C. N. Ashwath Narayan,**
   **Deputy Chief Minister and Minister for Higher Education,**

   **<u>Presided by :</u>**

   **Dr. P. M. Khodke,**
   **Central Project Advisor, NPIU MHRD, Govt. of India.**

**Chief Guests:**

**Dr. Rajkumar Khatri,**
**Additional Chief Secretary, Higher Education, Govt. of Karnataka.**

**Smt. Radha S. Chauhan,**
**Principal Secretary, Directorate of Technical Education, Govt. of Uttar Pradesh.**

**Date: 08-11-2019, Friday Time: 11-45 A.M.**

**Venue :Auditorium - Platinum Jubilee Academic Block, BMS College of Engineering, Bull Temple Road, Bangalore – 560 019**

5. **Paying Tributes to Late Justice N. Venkatachala, Former Judge, Supreme Court of India and Former Lok Ayukta, Karnataka**

**Date: 08-11-2019, Friday Time: 4-00 P.M.**

**Venue : Court Hall No. 1 of the Principal Bench of the High Court of Karnataka, Bengaluru.**

## ಪತ್ರಿಕಾ ಪ್ರಕಟಣೆ

## ಅತಿವೃಷ್ಠಿ – ಪ್ರವಾಹ ಎದುರಿಸುತ್ತಿರುವ ಜಿಲ್ಲೆ ಹಾಗೂ ತಾಲ್ಲೂಕುಗಳ ವಿವರ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ) :

ಪ್ರಸಕ್ತ ಸಾಲಿನಲ್ಲಿ ರಾಜ್ಯದ ಮುಂಗಾರು ಋತುವಿನಲ್ಲಿ ಅಕ್ಟೋಬರ್ ಮಾಹೆಯಲ್ಲಿ ಅತಿವೃಷ್ಟಿ–ಪ್ರವಾಹದಿಂದಾಗಿ ಜೀವ ಹಾನಿ, ಬೆಳೆ ಹಾನಿ ಹಾಗೂ ಮೂಲ ಸೌಕರ್ಯಗಳು ಹಾನಿಯಾಗಿರುವ ಹಿನ್ನೆಲೆಯಲ್ಲಿ ಅನುಬಂಧದಲ್ಲಿ ನಮೂದಿಸಿರುವ ರಾಜ್ಯದ 15 ಜಿಲ್ಲೆಗಳ 55 ತಾಲ್ಲೂಕುಗಳನ್ನು "ಅತಿವೃಷ್ಟಿ–ಪ್ರವಾಹ ಪೀಡಿತ ಪ್ರದೇಶಗಳು" ಎಂದು ಘೋಷಿಸಲಾಗಿದೆ.

ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ, ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ಮತ್ತು ಗುಬ್ಬಿ. ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ಮತ್ತು ಹೊಸದುರ್ಗ, ದಾವಣಗೆರೆ ಜಿಲ್ಲೆಯ ಚನ್ನಗಿರಿ, ದಾವಣಗೆರೆ

ಮತ್ತು ಹೊನ್ನಾಳಿ, ಬಳ್ಳಾರಿ ಜಿಲ್ಲೆಯ ಹಡಗಲಿ, ಹಗರಿಬೊಮ್ಮನಹಳ್ಳಿ ಮತ್ತು ಹರಪ್ಪನಹಳ್ಳಿ, ಬೆಳಗಾವಿ ಜಿಲ್ಲೆಯ ಬೈಲಹೊಂಗಲ, ಗೋಕಾಕ್ ಮತ್ತು ಖಾನಾಪುರ, ಬಾಗಲಕೋಟೆ ಜಿಲ್ಲೆಯ ಮುಧೋಳ, ಹಾವೇರಿ ಜಿಲ್ಲೆಯ ಬ್ಯಾಡಗಿ, ಹಾವೇರಿ, ಹಿರೇಕೆರೂರು, ರಾಣಿಬೆನ್ನೂರು ಮತ್ತು ಶಿಗ್ಗಾಂವ, ಧಾರವಾಡ ಜಿಲ್ಲೆಯ ಧಾರವಾಡ, ಹುಬ್ಬಳ್ಳಿ, ಕಲಘಟಗಿ ಮತ್ತು ಕುಂದಗೋಳ, ಶಿವಮೊಗ್ಗ ಜಿಲ್ಲೆಯ ಭದ್ರಾವತಿ, ಹೊಸನಗರ, ಸಾಗರ, ಶಿಕಾರಿಪುರ, ಶಿವಮೊಗ್ಗ ಮತ್ತು ಸೊರಬ. ಚಿಕ್ಕಮಗಳೂರು ಜಿಲ್ಲೆಯ ಕಡೂರು, ಕೊಪ್ಪ, ಮೂಡಿಗೆರೆ, ನರಸಿಂಹರಾಜಪುರ, ಶೃಂಗೇರಿ ಮತ್ತು ತರೀಕೆರೆ, ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ಸೋಮವಾರಪೇಟೆ, ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ, ಬಂಟ್ವಾಳ, ಮಂಗಳೂರು ಮತ್ತು ಪುತ್ತೂರು. ಉಡುಪಿ ಜಿಲ್ಲೆಯ ಕಾರ್ಕಳ, ಕುಂದಾಪುರ ಮತ್ತು ಉಡುಪಿ, ಉತ್ತರ ಕನ್ನಡ ಜಿಲ್ಲೆಯ ಅಂಕೋಲ, ಭಟ್ಕಳ, ಹಳಿಯಾಳ, ಹೊನ್ನಾವರ, ಕಾರವಾರ, ಕುಮಟ, ಸಿದ್ದಾಪುರ, ಶಿರಸಿ, ಜೊಯಿಡಾ ಮತ್ತು ಯಲ್ಲಾಪುರ ತಾಲ್ಲೂಕುಗಳನ್ನು "ಅತಿವೃಷ್ಟಿ-ಪ್ರವಾಹ ಪೀಡಿತ ಪ್ರದೇಶಗಳು" ಎಂದು ಘೋಷಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅತಿವೃಷ್ಠಿ-ಪ್ರವಾಹ ಎದುರಿಸುತ್ತಿರುವ ಜಿಲ್ಲೆ ಹಾಗೂ ತಾಲ್ಲೂಕುಗಳ ವಿವರ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

ಪ್ರಸಕ್ತ ಸಾಲಿನಲ್ಲಿ ರಾಜ್ಯದ ಮುಂಗಾರು ಋತುವಿನಲ್ಲಿ ಅಕ್ಟೋಬರ್ ಮಾಹೆಯಲ್ಲಿ ಅತಿವೃಷ್ಟಿ-ಪ್ರವಾಹದಿಂದಾಗಿ ಜೀವ ಹಾನಿ, ಬೆಳೆ ಹಾನಿ ಹಾಗೂ ಮೂಲ ಸೌಕರ್ಯಗಳು ಹಾನಿಯಾಗಿರುವ ಹಿನ್ನೆಲೆಯಲ್ಲಿ ಅನುಬಂಧದಲ್ಲಿ ನಮೂದಿಸಿರುವ ರಾಜ್ಯದ 13 ಜಿಲ್ಲೆಗಳ 41 ತಾಲ್ಲೂಕುಗಳನ್ನು ಮುಂದಿನ ಆದೇಶದವರಗೆ "ಅತಿವೃಷ್ಟಿ-ಪ್ರವಾಹ ಪೀಡಿತ ಪ್ರದೇಶಗಳು" ಎಂದು ಘೋಷಿಸಲಾಗಿದೆ.

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ, ಚಿತ್ರದುರ್ಗ, ಹಿರಿಯೂರು ಮತ್ತು ಮೊಳಕಾಲ್ಮೂರು, ದಾವಣಗೆರೆ ಜಿಲ್ಲೆಯ ಜಗಳೂರು, ಬಳ್ಳಾರಿ ಜಿಲ್ಲೆಯ ಬಳ್ಳಾರಿ ಮತ್ತು ಸಿರಗುಪ್ಪ, ಕೊಪ್ಪಳ ಜಿಲ್ಲೆಯ ಗಂಗಾವತಿ, ರಾಯಚೂರು ಜಿಲ್ಲೆಯ ಸಿಂಧನೂರು, ಬೆಳಗಾವಿ ಜಿಲ್ಲೆಯ ಬೆಳಗಾವಿ ಮತ್ತು ಖಾನಾಪುರ, ಶಿವಮೊಗ್ಗ ಜಿಲ್ಲೆಯ ಹೊಸನಗರ, ಸಾಗರ, ಸೊರಬ ಮತ್ತು ತೀರ್ಥಹಳ್ಳಿ, ಹಾಸನ ಜಿಲ್ಲೆಯ ಆಲೂರು ಮತ್ತು ಸಕಲೇಶಪುರ, ಚಿಕ್ಕಮಗಳೂರು ಜಿಲ್ಲೆಯ ಚಿಕ್ಕಮಗಳೂರು, ಕೊಪ್ಪ, ಮೂಡಿಗೆರೆ, ನರಸಿಂಹರಾಜಪುರ ಮತ್ತು ಶೃಂಗೇರಿ, ಕೊಡಗು ಜಿಲ್ಲೆಯ ಮಡಿಕೇರಿ, ಸೋಮವಾರಪೇಟೆ ಮತ್ತು ವಿರಾಜಪೇಟೆ, ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ, ಬಂಟ್ವಾಳ, ಮಂಗಳೂರು, ಪುತ್ತೂರು ಮತ್ತು ಸುಳ್ಯ, ಉಡುಪಿ ಜಿಲ್ಲೆಯ ಕಾರ್ಕಳ ಹಾಗೂ ಉತ್ತರ ಕನ್ನಡ ಜಿಲ್ಲೆಯ ಅಂಕೋಲ, ಹಳಿಯಾಳ, ಹೊನ್ನಾವರ, ಕಾರವಾರ, ಕುಮಟ, ಮುಂಡಗೋಡ ಸಿದ್ದಾಪುರ, ಶಿರಸಿ, ಜೊಯಿಡಾ ಮತ್ತು ಯಲ್ಲಾಪುರ ತಾಲ್ಲೂಕುಗಳನ್ನು "ಅತಿವೃಷ್ಟಿ-ಪ್ರವಾಹ ಪೀಡಿತ ಪ್ರದೇಶಗಳು" ಎಂದು ಘೋಷಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಇಲಾಖಾ ಹಾಗೂ ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ನಾಮನಿರ್ದೇಶನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

2019–20 ನೇ ಸಾಲಿನ ಇಲಾಖಾ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ಆನ್‌ಲೈನ್‌ನಲ್ಲಿ ನಾಮನಿರ್ದೇಶನವನ್ನು ಆಹ್ವಾನಿಸಲಾಗಿದೆ.

ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮನಿರ್ದೇಶನವನ್ನು ಸಲ್ಲಿಸಲು ಮಾಹಿತಿಗಾಗಿ www.https://sarvothamaawards,karnataka,gov.in ಜಾಲತಾಣವನ್ನು ಸಂಪರ್ಕಿಸಬಹುದಾಗಿದೆ. ಆನ್‌ಲೈನ್‌ನಲ್ಲಿ ನಾಮ ನಿರ್ದೇಶನವನ್ನು ಸಲ್ಲಿಸಲು ನವೆಂಬರ್ 30 ಕೊನೆಯ ದಿನಾಂಕವಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಗುಲಾಬಿ ಈರುಳ್ಳಿ ರಫ್ತು ಮಾಡಲು ಆಹ್ವಾನ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

ಬೆಂಗಳೂರು ಗುಲಾಬಿ ಈರುಳ್ಳಿಯನ್ನು ರಫ್ತು ಮಾಡುವ ಸಲುವಾಗಿ ಚಿಕ್ಕಬಳ್ಳಾಪುರ, ಕೋಲಾರ ಮತ್ತು ಬೆಂಗಳೂರು ಗ್ರಾಮೀಣ ಭಾಗಗಳಲ್ಲಿ ಬೆಳೆದು ಸಂಗ್ರಹಿಸಿರುವ ಬೆಂಗಳೂರು ಗುಲಾಬಿ ಈರುಳ್ಳಿ ರಫ್ತು ಮಾಡಲು ಇಚ್ಚಿಸುವ ರಫ್ತುದಾರರನ್ನು ಆಹ್ವಾನಿಸಲಾಗಿದೆ. ಈರುಳ್ಳಿಯನ್ನು ರಫ್ತುಮಾಡಲು ನವೆಂಬರ್ 30 ಕೊನೆಯ ದಿನವಾಗಿದೆ ಎಂದು ತೋಟಗಾರಿಕೆ ಇಲಾಖೆ ಪ್ರಕಟಣೆ ತಿಳಿಸಿದೆ.

## Exporters Invited for Exporting Bangalore Rose Onion

Bengaluru, November 7 (Karnataka Information) :

The Ministry of Commerce and Industry has invited the exporters, who are interested to export Bangalore Rose Onion from Karnataka - cultivated and procured from Chikkaballapura, Kolar and parts of Bangalore Rural Only.

This signature produce shall be allowed to export shipment as per the norms of export policy issued by DGFT notification from Chennai port only.

The interested and licensed exporters (KYC details) can submit their requisition along with letter of Credit. The same details are also available in the website www.horticulture.karnataka.gov.in.

# ಶಾಲಾ ವಿದ್ಯಾರ್ಥಿಗಳಿಗಾಗಿ ವೈಜ್ಞಾನಿಕ ಮಾದರಿಗಳ ಸ್ಪರ್ಧೆ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

ಕರ್ನಾಟಕ ವಿಜ್ಞಾನ ಮತು ತಂತ್ರಜ್ಞಾನ ಅಕಾಡೆಮಿಯು ಸ್ಟಿಂಗ – ಇನ್ನೋವೇಟೀವ್ ಸ್ಕೂಲ್ ಆಫ್ ದಿ ಇಯರ್ 2019-20 ಕಾರ್ಯಕ್ರಮದಡಿ – ಎಗ್ಸ್‌ಹೆಡ್ಸ್ ಸಂಸ್ಥೆಯೊಂದಿಗೆ ವೈಜ್ಞಾನಿಕ ಮಾದರಿಗಳ ಸ್ಪಥೆಯನ್ನು ಆಯೋಜಿಸಿದೆ.

ಈ ಸ್ಪರ್ಧೆಯಲ್ಲಿ ಶಾಲಾ ವಿದ್ಯಾರ್ಥಿಗಳು ವೈಯಕ್ತಿಕವಾಗಿ ಅಥವಾ ಇಬ್ಬರು ಅಥವಾ ನಾಲ್ವರು ವಿದ್ಯಾರ್ಥಿಗಳ ಒಂದು ತಂಡವಾಗಿ ಭಾಗವಹಿಸಬಹುದಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಯನ್ನು **www.kstacademy.in** ಹಾಗೂ **www.eggheadsedu.com** ಜಾಲತಾಣಗಳಿಂದ ಪಡೆಯಬಹುದು ಅಲ್ಲದೆ, ದೂರವಾಣಿ ಸಂಖ್ಯೆ : 080 – 2972 1550 ಅಥವಾ ಮೊಬೈಲ್ ಸಂಖ್ಯೆ : 80887 97834 ಮೂಲಕ ಸಂಪರ್ಕಿಸಬಹುದಾಗಿದೆ. ಅರ್ಜಿ ನೋಂದಾಯಿಸಿಕೊಳ್ಳಲು ನವೆಂಬರ್ 25 ಕೊನೆಯ ದಿನಾಂಕವಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗೆ ಅವಧಿ ವಿಸ್ತರಣೆ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ) :

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಿಂದ ಆನ್‌ಲೈನ್ ಮುಖಾಂತರ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕವನ್ನು ನವೆಂಬರ್ 8 ರಿಂದ ನವೆಂಬರ್ 30 ರವರೆಗೆ ವಿಸ್ತರಿಸಲಾಗಿದೆ.

ಅಲ್ಲದೆ, ಚಲನ್ ಮೂಲಕ ಶುಲ್ಕ ಪಾವತಿಗೆ ಕೊನೆಯ ದಿನಾಂಕವನ್ನು ಡಿಸೆಂಬರ್ 3 ರವರೆಗೆ ಆಯ್ಕೆ ಸಮಿತಿಯ ನಿರ್ಣಯದಂತೆ ವಿಸ್ತರಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಅಹವಾಲು ಮನವಿ ಸಲ್ಲಿಸಲು ಅವಕಾಶ

ಬೆಂಗಳೂರು, ನವೆಂಬರ್ 7, (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರವು ನ್ಯಾಯಮೂರ್ತಿ ಎಚ್. ಎನ್. ನಾಗಮೋಹನದಾಸ್ ಅವರ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ಶಿಕ್ಷಣ ಮತ್ತು ಸರ್ಕಾರಿ, ಸಾರ್ವಜನಿಕ ಉದ್ಯೋಗಗಳಿಗೆ ಈಗಿರುವ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವ ಕುರಿತು ವರದಿಯನ್ನು ನೀಡುವಂತೆ ಆಯೋಗವನ್ನು ರಚಿಸಿದೆ.

ಈ ವಿಷಯದಲ್ಲಿ ಆಸಕ್ತಿಯಿರುವ ಸಾರ್ವಜನಿಕರು, ಸಂಬಂಧಿಸಿದ ಸಮುದಾಯಗಳು, ಸಂಘ–ಸಂಘಟನೆಗಳು–ಸಂಸ್ಥೆಗಳು, ವಿದ್ಯಾಂಸರು, ಸಾಮಾಜಿಕ ಕಾರ್ಯಕರ್ತರು, ಇತರೆ ಯಾರೂ ಕೂಡಾ ಆಯೋಗಕ್ಕೆ ಮನವಿ ಅಥವಾ ಅಹವಾಲುಗಳನ್ನು ವರದಿಗಳನ್ನು ಬೇಡಿಕೆಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸಬಹುದು. ತಮ್ಮ ಮನವಿಗಳು ಆಯೋಗದ ವಿಷಯಕ್ಕೆ ಮಾತ್ರ ಸಂಬಂಧಿಸಿರಬೇಕು ಮತ್ತು ಅವು ಸಾಧ್ಯವಾದಷ್ಟು ಸಂಕ್ಷಿಪ್ತವಾಗಿರಬೇಕು.

ಮನವಿಗಳನ್ನು ಜಂಟಿ ನಿರ್ದೇಶಕರು (ಆಡಳಿತ) ಹಾಗೂ ಪದನಿಮಿತ್ತ ಸದಸ್ಯ ಕಾರ್ಯದರ್ಶಿಗಳು, ನ್ಯಾಯಮೂರ್ತಿ ಹೆಚ್ ಎನ್ ನಾಗಮೋಹನ್ ದಾಸ್ ಆಯೋಗ, ಸಮಾಜ ಕಲ್ಯಾಣ ಇಲಾಖೆ, ಕಲ್ಯಾಣ ಕೇಂದ್ರ ಆವರಣ, ಯವನಿಕ, ನೃಪತುಂಗ ರಸ್ತೆ, ಬೆಂಗಳೂರು – 560 002 ಇವರಿಗೆ ಡಿಸೆಂಬರ್ 10 ರೊಳಗೆ ಅಂಚೆಯ ಮೂಲಕ ಅಥವಾ ಖುದ್ದಾಗಿ ತಲುಪಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**********